2. 24 ಗ್ರಾಮಗಳಲ್ಲಿ ಹೆಚ್ಚುವರಿಯಾಗಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಲಾಗುತ್ತಿದೆ.

3. ಗೊಪ್ಪೇನಹಳ್ಳಿಯಲ್ಲಿರುವ 66:11 ಕೆ.ವಿ. ವಿದ್ಯುತ್ ಸಬ್-ಸ್ಟೇಷನ್ನಿನಲ್ಲಿ ಕೆ.ಎಂ.ವಿ.ಎ. ಸಾಮರ್ಥ್ಯದ ಪವರ್ ಟ್ರಾನ್ಸ್‌ಫಾರ್ಮರ್‌ನ್ನು ಹೆಚ್ಚುವರಿಯಾಗಿ ಅಳವಡಿಸಿ ಸದರೀ, ವಿದ್ಯುತ್ ಸಬ್ ಸ್ಟೇಷನ್ನಿನ ಸಾಮರ್ಥ್ಯವನ್ನು ಹೆಚ್ಚಳಗೊಳಿಸುವ ಕಾರ್ಯ ಪ್ರಗತಿಯಲ್ಲಿದೆ.

ಅಲ್ಲದೇ ಮಾವಿನಕಟ್ಟೆ ಗ್ರಾಮದಲ್ಲಿ ಒಂದು 66:11 ಕೆ.ವಿ ವಿದ್ಯುತ್ ಸಬ್-ಸ್ಟೇಷನನ್ನು ನಿರ್ಮಾಣ ಮಾಡಲು ಉದ್ದೇಶಿಸಿದೆ.

ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಸ ತೆಗೆಯುವ ಗುತ್ತಿಗೆದಾರರ ಕುರಿತು.

1659(1985)

ಶ್ರೀ ಕರಿಯಣ್ಣ(ಹೊಳೆಹೊನ್ನೂರು): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಸ ತೆಗೆಯುವ ಸ್ವಚ್ಛತಾ ಕಾಮಗಾರಿಗಳನ್ನು ಎಷ್ಟು ಜನ ಗುತ್ತಿಗೆದಾರರಿಗೆ ಕೂಡಲಾಗಿದೆ? ಇದರಿಂದ ವರ್ಷಕ್ಕೆ ಎಷ್ಟು ಹಣ ಖರ್ಚು ಬರುತ್ತದೆ ಎಂಬುದನ್ನು ಹಿಂದಿನ ವರ್ಷದ ಅಂಕೆಗಳನ್ನು ಕೊಡುವುದು?

ಆ) ಈ ಗುತ್ತಿಗೆದಾರರು ಯಾವ ಜಾತಿಯ ಜನರಿಂದ ಈ ಕೆಲಸವನ್ನು ಮಾಡಿಸುತ್ತಿರುವವರು? ಇವರಿಗೆ ತಿಂಗಳಿಗೆ ಎಷ್ಟು ಹಣ ಕೊಡುತ್ತಾರೆ? (ಸಂಬಳ ಅಥವಾ ಕೂಲಿ) ಮತ್ತು ಎಷ್ಟು ಜನ ಕೆಲಸ ಮಾಡುವರು (ವಿವರ ಒದಗಿಸುವುದು)?

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು):

ಅ) 130 ವರ್ಷಕ್ಕೆ ರೂ.19,40,76,236-00

ಆ) ಸ್ವಚ್ಛತೆಯ ಕೆಲಸವನ್ನು ನಿರ್ವಹಿಸಲು ಯಾವ ಜಾತಿಯಿಂದ ಜನರು ಬರುತ್ತಾರೋ ಅಂತಹವರಿಂದ ಕೆಲಸ ಮಾಡಿಸಲಾಗುತ್ತಿದೆ. ಒಟ್ಟು 6320 ಜನ ಸ್ವಚ್ಛತಾ ಕೆಲಸವನ್ನು ನಿರ್ವಹಿಸುತ್ತಿದ್ದಾರೆ. ಇವರುಗಳಿಗೆ ಲೇಬರ್ ಕಾಂಟ್ರಾಕ್ಟ್

ನಿಯಮದಂತೆ ಹಾಲಿ ಚಾಲ್ತಿಯಲ್ಲಿರುವ ದಿನಗೂಲಿ ವೇತನವನ್ನು ನೀಡಲಾಗುತ್ತಿದೆ.

ವಿಶ್ವವಿದ್ಯಾಲಯ ಮಟ್ಟದಲ್ಲಿ ಹೆಚ್ಚಿನ ಅಂಕ ಪಡೆದ ಎಸ್.ಸಿ./ಎಸ್.ಟಿ. ಪದವೀಧರರಿಗೆ ಹುದ್ದೆ

1660(1989)

ಶ್ರೀ ಕರಿಯಣ್ಣ(ಹೊಳೆಹೊನ್ನೂರು): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಶ್ವವಿದ್ಯಾಲಯ ಮಟ್ಟದಲ್ಲಿ ಹೆಚ್ಚಿನ ಅಂಕ ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪದವೀಧರರಿಗೆ ಗೆಜೆಟೆಡ್ ಹುದ್ದೆಗೆ ನೇರ ನೇಮಕ ಮಾಡುವ ಸರ್ಕಾರಿ ಆದೇಶವನ್ನು ಎಂದು ಹೊರಡಿಸಲಾಗಿದೆ.

ಆ) ವಿಶ್ವವಿದ್ಯಾಲಯದಿಂದ ಹೆಚ್ಚಿಗೆ ಅಂಕ ಪಡೆದವರ ಪಟ್ಟಿಯನ್ನು ತರಿಸಿಕೊಳ್ಳಲಾಗಿದೆಯೇ? ಹಾಗಿದ್ದಲ್ಲಿ ಅವರ ಸಂಖ್ಯೆ ಎಷ್ಟು?

ಇ) ಈ ನೇರ ನೇಮಕಾತಿ ವಿಷಯವು ಯಾವ ಹಂತದಲ್ಲಿದೆ?

ಶ್ರೀ ಎಸ್.ಎಂ.ಕೃಷ್ಣ(ಮುಖ್ಯ ಮಂತ್ರಿ):

ಅ) ದಿನಾಂಕ:11-04-1985 ರಂದು

ಆ) 1985ರ ನಿಯಮಗಳಡಿಯಲ್ಲಿ ನಿಗದಿಪಡಿಸಿದ ಪದವಿ ಮತ್ತು ಸ್ನಾತಕೋತ್ತರ ಪದವಿಗಳಲ್ಲಿ ಒಂದೇ ಪ್ರಯತ್ನದಲ್ಲಿ ಅವರುಗಳಲ್ಲಿಯೇ ಪ್ರಥಮ ದ್ವಿತೀಯ ಮತ್ತು ತೃತೀಯ ಸ್ಥಾನಗಳನ್ನು ಪಡೆದುಕೊಂಡಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ಅಭ್ಯರ್ಥಿಗಳ ಪಟ್ಟಿಗಳನ್ನು ರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆಯಲಾಗಿರುತ್ತದೆ. 1996-97ನೇ ಸಾಲಿನವರೆಗೆ ಒಟ್ಟು 80 ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ.

ಇ) 1997-98 ಮತ್ತು 1998-99ನೇ ಸಾಲಿನ ಆಯ್ಕೆ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.